ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 15/12/2019

ಕ.ಪ್ರ 15.12.19

## ಆನಂದ್ ಸಿಂಗ್ ಮೇಲೆ ಹಲ್ಲೆ ಕೇಸ್: ಚಾರ್ಜ್‌ಶೀಟ್ ಸಲ್ಲಿಕೆ

ಬೆಂಗಳೂರು/ರಾಮನಗರ: ಇದೇ ವರ್ಷಾರಂಭದಲ್ಲಿ ಬಿಡದಿಯ ಈಗಲ್‌ಟನ್ ರೆಸಾರ್ಟ್‌ನಲ್ಲಿ ವಿಜಯನಗರ ಶಾಸಕ ಆನಂದ್ ಸಿಂಗ್ ಮೇಲೆ ಕಂಪ್ಲಿ ಶಾಸಕ ಜೆ.ಎನ್. ಗಣೇಶ್ ಹಲ್ಲೆ ನಡೆಸಿದ್ದ ಪ್ರಕರಣ ಸಂಬಂಧ ಬಿಡದಿ ಠಾಣೆ ಪೊಲೀಸರು ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದಾರೆ.

ವಿವರ ➔ 6

# ಚಾರ್ಜ್‌ಶೀಟಲ್ಲಿ ಗಣೇಶ್ ವಿರುದ್ಧ ಸಾಕ್ಷ್ಯ?

## ಆನಂದ್ ಸಿಂಗ್‌ಗೆ ಹಲ್ಲೆ: ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ಆರೋಪಪಟ್ಟಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು/ರಾಮನಗರ 15.12.19.




ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರ್ಕಾರದ ವೇಳೆ ಬಿಡದಿಯ ಈಗಲ್‌ಟನ್ ರೆಸಾರ್ಟ್‌ನಲ್ಲಿ ಶಾಸಕ ಆನಂದ್ ಸಿಂಗ್ ಮೇಲೆ ಶಾಸಕ ಜೆ.ಎನ್.ಗಣೇಶ್ ಹಲ್ಲೆ ನಡೆಸಿದ ಪ್ರಕರಣ ಸಂಬಂಧ ಬಿಡದಿ ಪೊಲೀಸರು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಿದ್ದಾರೆ.

ಇಬ್ಬರು ಶಾಸಕರ ಗಲಾಟೆ ಪ್ರಕರಣ ಸಂಬಂಧ 90 ಪುಟಗಳ ಆರೋಪಪಟ್ಟಿ ಸಲ್ಲಿಸಲಾಗಿದೆ. ವಿಚಾರಣೆ ನಡೆಸಿದ ಬಿಡದಿ ಪೊಲೀಸರು 35 ಸಾಕ್ಷಿಗಳ ಹೇಳಿಕೆಗಳನ್ನು ದಾಖಲು ಮಾಡಿದ್ದಾರೆ. ಬಹುತೇಕ ಎಲ್ಲಾ ಸಾಕ್ಷ್ಯಗಳು ಶಾಸಕ ಗಣೇಶ್ ವಿರುದ್ಧವೇ ಇವೆ ಎಂದು ಮೂಲಗಳು ತಿಳಿಸಿವೆ. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಆರೋಪಪಟ್ಟಿಯನ್ನು ಸ್ವೀಕರಿಸಿದ್ದು, ವಿಚಾರಣೆ ನಡೆಸಲಿದೆ.

ಆನಂದ್ ಸಿಂಗ್ ದೂರಿನಲ್ಲಿ ಉಲ್ಲೇಖಿಸಿದ್ದ ಪ್ರತ್ಯಕ್ಷದರ್ಶಿಗಳಾದ ಮಾಜಿ ಸಚಿವ ಇ.ತುಕಾರಾಂ, ಶಾಸಕರಾದ ರಘುಮೂರ್ತಿ, ರಾಮಪ್ಪ, ತನ್ವೀರ್ ಸೇಠ್ ಪ್ರಮುಖ ಸಾಕ್ಷಿಗಳು ಎಂಬುದಾಗಿ ಪೊಲೀಸರು ಉಲ್ಲೇಖಿಸಿದ್ದಾರೆ ಎಂದು ತಿಳಿದುಬಂದಿದೆ. ಘಟನೆ ವೇಳೆ ಸ್ಥಳದಲ್ಲಿದ್ದ ಜನಪ್ರತಿನಿಧಿಗಳು ಹಾಗೂ ಹೋಟೆಲ್ ಸಿಬ್ಬಂದಿಯ ಹೇಳಿಕೆಗಳು, ಹೋಟೆಲ್‌ನ ಸಿಸಿಟಿವಿ ದೃಶ್ಯಾವಳಿಗಳು, ದೂರನ್ನು ಪುಷ್ಟೀಕರಿಸುವಂತಹ ಸಾಕ್ಷ್ಯಗಳು, ಭೌತಿಕ ಸುಳಿವುಗಳನ್ನು ಪೊಲೀಸರು ದಾಖಲೆಗಳಾಗಿ ಸಂಗ್ರಹಿಸಿ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ.

**ಘಟನೆ ಹಿನ್ನೆಲೆ:** ಜೆಡಿಎಸ್-ಕಾಂಗ್ರೆಸ್ ಮೈತ್ರಿ ಸರ್ಕಾರ ಉಳಿಸಿಕೊಳ್ಳುವ ನಿಟ್ಟಿನಲ್ಲಿ 2019ರ ಜನವರಿ 18ರಂದು ಕಾಂಗ್ರೆಸ್ ಶಾಸಕರು ಬಿಡದಿಯ ಈಗಲ್ ಟನ್ ರೆಸಾರ್ಟ್‌ನಲ್ಲಿ ವಾಸ್ತವ್ಯ ಹೂಡಿದ್ದರು. ಜ.19ರ ತಡರಾತ್ರಿ ಡಿನ್ನರ್ ಪಾರ್ಟಿಯ ನಂತರ ವಿಜಯನಗರ ಕ್ಷೇತ್ರ ಶಾಸಕ ಆನಂದ್ ಸಿಂಗ್ ಮೇಲೆ ಶಾಸಕ ಗಣೇಶ್ ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದರು. ಆನಂದ್ ಸಿಂಗ್ ಅವರಿಗೆ ಬಲಗಣ್ಣಿನ ಮೇಲೆ ಹುಬ್ಬು, ಭುಜ ಹಾಗೂ ಹೊಟ್ಟೆ ಭಾಗಕ್ಕೆ ಗಾಯಗಳಾಗಿ ಬೆಂಗಳೂರಿನ ಅಪೋಲೊ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದರು. ಆದರೆ, ಶಾಸಕರ ಗಲಾಟೆ ಬಗ್ಗೆ ರೆಸಾರ್ಟ್‌ನಲ್ಲಿದ್ದ ಸಚಿವರು, ಶಾಸಕರು ಅಥವಾ ರೆಸಾರ್ಟ್‌ನ ಸಿಬ್ಬಂದಿ ದೂರು ನೀಡಿರಲಿಲ್ಲ.

ಆನಂದ್ ಸಿಂಗ್ ನೀಡಿದ ದೂರಿನ ಮೇರೆಗೆ ಬಿಡದಿ ಪೊಲೀಸ್ ಠಾಣೆಯಲ್ಲಿ ಶಾಸಕ ಗಣೇಶ್ ವಿರುದ್ಧ ಕೊಲೆ ಯತ್ನ ಪ್ರಕರಣ ದಾಖಲಾಯಿತು. ತರುವಾಯ ಗಣೇಶ್ ತಲೆ ಮರೆಸಿಕೊಂಡಿದ್ದರು. ಪತ್ತೆಗೆ 4 ಪೊಲೀಸ್ ತಂಡಗಳು ಕಾರ್ಯಾಚರಣೆ ನಡೆಸಿದವು. ತಿಂಗಳ ಬಳಿಕ ಗುಜರಾತ್‌ನ ಅಹಮದಾಬಾದ್‌ನಲ್ಲಿ ಗಣೇಶ್ ಸಿಕ್ಕಿದ್ದರು. ಬಂಧನದ ಬಳಿಕ ಗಣೇಶ್ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಾರೆ. ಗಲಾಟೆ ಶಾಸಕರ ನಡುವೆ ಉಂಟಾದ ಕಾರಣಕ್ಕಾಗಿ ರಾಮನಗರ ಕೋರ್ಟ್‌ನಿಂದ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ವರ್ಗಾವಣೆಗೊಂಡಿದೆ.